**ಅ.ದಾ.ಸಂ. 103/2020 ಪಿ.ಡಬ್ಲೂ.4**

**<u>ದಿನಾಂಕಃ 13.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು:- ಪ್ರತಿವಾದಿ ಪರ ಶ್ರೀ ಹೆಚ್.ಎಸ್.ಹೆಚ್. ವಕೀಲರಿಂದಃ</u>**

1) ನಾನು ಪಿಯುಸಿ ವರೆಗೂ ವಿದ್ಯಾಭಾಸ ಮಾಡಿರುತ್ತೇನೆ. ನನಗೆ ಕನ್ನಡ ಓದಲು ಬರೆಯಲು ಬರುತ್ತದೆ. ಈ ಪ್ರಕರಣದ ವಾದಿ ಮತ್ತು ಪ್ರತಿವಾದಿಗಳು ನಮ್ಮ ಗ್ರಾಮದವರು ಮತ್ತು ಅವರ ಪರಿಚಯ ಇದೆ. ನನ್ನ ತಾಯಿ ಜಯರತ್ನಮ್ಮ ರವರು ವಾದಿಗೆ ದಾವಾ ಸ್ವತ್ತನ್ನು ಮಾರಾಟ ಮಾಡಿರುತ್ತಾರೆ. ದಾವಾ ಸ್ವತ್ತು ಸರ್ವೆ ನಂಬರ್ ಗೆ ಒಳಪಟ್ಟಿದ್ದ ಸಮಯದಲ್ಲಿ ಅದನ್ನು ನನ್ನ ತಾಯಿ ವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ಆ ರೀತಿ ಮಾರಾಟ ಮಾಡಿದ ಸ್ವತ್ತಿನ ಪೂರ್ವಕ್ಕೆ ರಸ್ತೆ ಇದ್ದು ತದನಂತರ 1ನೇ ಪ್ರತಿವಾದಿಯ ಮನೆ ಇದೆ ಎಂದರೆ ಸಾಕ್ಷಿಯು ಅಲ್ಲಿ ರಸ್ತೆ ಇಲ್ಲ ಎಂದು ನುಡಿಯುತ್ತಾರೆ. ವಾದಿ ಮತ್ತು 1ನೇ ಪ್ರತಿವಾದಿಯ ಮನೆಗಳ ನಡುವೆ ರಸ್ತೆ ಇದೆ ಎಂದರೆ ಸರಿಯಲ್ಲ. 1ನೇ ಪ್ರತಿವಾದಿಯು ವಾದಿಗೆ ಸೇರಿದ ಜಾಗವನ್ನು ಯಾವುದೇ ರೀತಿ ಒತ್ತುವರಿ ಮಾಡಿಲ್ಲ ಎಂದರೆ ಸರಿ. ವಾದಿ ಮತ್ತು 1ನೇ ಪ್ರತಿವಾದಿಯು ತಮ್ಮ ತಮ್ಮ ಜಾಗಗಳಲ್ಲಿ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿ.

2) ರಸ್ತೆಯನ್ನು ವಾದಿ ಒತ್ತುವರಿ ಮಾಡಿಕೊಂಡಿದ್ದರು ಎಂದು ಹೇಳಿ ಒತ್ತುವರಿ ಜಾಗವನ್ನು ತೆರವುಗೊಳಿಸುವಂತೆ ವಾದಿಗೆ ತಹಶೀಲ್ದಾರ್ ಮತ್ತು ಪಿ.ಡಿ.ಓ ರವರು ನೋಟೀಸನ್ನು ನೀಡಿದ್ದರು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಆ ರೀತಿ ನೋಟೀಸು ನೀಡಿದ ನಂತರ ಪಿ.ಡಿ.ಓ ರವರು ಖುದ್ದು ಸ್ಥಳಕ್ಕೆ ಹೋಗಿ ಒತ್ತುವರಿ ಮಾಡಿದ ಸ್ಥಳದಿಂದ ವಾದಿಯನ್ನು ತೆರವುಗೊಳಿಸಿರುತ್ತಾರೆ ಎಂದರೆ ಸಾಕ್ಷಿಯು ಆ ರೀತಿ ರಸ್ತೆ ಇಲ್ಲ ಮತ್ತು ಒತ್ತುವರಿ ಮಾಡಿಲ್ಲ ಎಂದು ನುಡಿಯುತ್ತಾರೆ. ಆ ರೀತಿ ಒತ್ತುವರಿ ತೆರವುಗೊಳಿಸಿ ಈಗಲೂ ಸಹ ಅಲ್ಲಿ ರಸ್ತೆ ದುರಸ್ತಿ ಕಾರ್ಯ ಮಾಡುತ್ತಿದ್ದಾರೆ ಎಂದರೆ ಸಾಕ್ಷಿಯು ದಾವಾ ಸ್ವತ್ತಿನ ಪಶ್ಚಿಮ ದಿಕ್ಕಿನಲ್ಲಿ ರಸ್ತೆ ದುರಸ್ತಿ ಮಾಡುತ್ತಿರುವುದಾಗಿ ನುಡಿಯುತ್ತಾರೆ.

3) ಪಿ.ಡಬ್ಲ್ಯೂ-3 ಬೋರೇಗೌಡ ನನ್ನ ಸಂಬಂಧಿಕರು ಎಂದರೆ ಸರಿ. ಒತ್ತುವರಿ ಆಗಿರುವ ವಿಚಾರ ನನಗೆ ಗೊತ್ತಿದ್ದರೂ ಸಹ ವಾದಿಗೆ ನನ್ನ ತಾಯಿ ಸ್ವತ್ತನ್ನು ಮಾರಾಟ ಮಾಡಿರುವ ಕಾರಣ ವಾದಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ:- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**